ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ – 314

**29 ಜೂನ್ 2024 * ಶನಿವಾರ * ಸಂಜೆ 6.00**

**ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಸರಸ್ವತಿಪುರಂ, ಮೈಸೂರು**

---

**ದಿವ್ಯ ಆಶೀರ್ವಾದ**
**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

**ಅಧ್ಯಕ್ಷತೆ**
**ಶ್ರೀ ಟಿ.ಎಸ್. ಶ್ರೀವತ್ಸ**
ವಿಧಾನಸಭಾ ಸದಸ್ಯರು, ಕೆ.ಆರ್. ಕ್ಷೇತ್ರ, ಮೈಸೂರು

**ಉಪನ್ಯಾಸ**
**ಡಾ. ಬಿ.ವಿ. ವಸಂತಕುಮಾರ್**
ಪ್ರಾಂಶುಪಾಲರು, ಮಹಾರಾಣಿ ಪದವಿ ಕಾಲೇಜು, ಮೈಸೂರು

**ವಿಷಯ : ಶ್ರೀ ನಿಜಗುಣ ಶಿವಯೋಗಿಗಳವರ ಪರಮಾರ್ಥಗೀತೆ**

**ಭಜನೆ : ಶ್ರೀ ಶಿವರಾತ್ರಿ ರಾಜೇಂದ್ರ ಕಲಾ ತಂಡ, ಮೈಸೂರು**

---

**ಪ್ರಾಯೋಜಕರು**
**ಕು. ನಿರುಪಮ್ ಎನ್. ವಿಜಯ್**
**ಡಾ. ಬೆಳಕು ವಿ. ಚಂದ್ ಮತ್ತು ಶ್ರೀ ಬಿ. ನಿರಂಜನಮೂರ್ತಿ**
ಸಹಾಯಕ ನಿರ್ದೇಶಕರು, ಕಾಲೇಜು ಶಿಕ್ಷಣ ವಿಭಾಗ, ಜೆಎಸ್‌ಎಸ್ ಮಹಾವಿದ್ಯಾಪೀಠ

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಈ ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಟಿ.ಎಸ್. ಶ್ರೀವತ್ಸರವರು** ಬಿ.ಕಾಂ. ಪದವೀಧರರು. ಮೈಸೂರಿನ ಕೃಷ್ಣರಾಜ ವಿಧಾನಸಭಾ ಕ್ಷೇತ್ರದಿಂದ ಮೊದಲಬಾರಿಗೆ ಆಯ್ಕೆಗೊಂಡು ವಿಧಾನಸಭೆ ಪ್ರವೇಶಿಸಿದ್ದಾರೆ. ರಾಷ್ಟ್ರೀಯ ಸ್ವಯಂ ಸೇವಾ ಸಂಘದ ಮೂಲಕ ಜನಸೇವೆಗೆ ಬಂದವರು. ಬಿಜೆಪಿ ಪಕ್ಷದ ಮೈಸೂರು ನಗರ ಘಟಕದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ. ಪಕ್ಷ ವಹಿಸಿದ ವಿವಿಧ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿದ್ದಾರೆ. 2023ರ ಚುನಾವಣೆಯಲ್ಲಿ ಶಾಸಕರಾಗಿ ಆಯ್ಕೆಯಾಗಿ ಕ್ಷೇತ್ರದ ಸರ್ಕಾರಿ ಶಾಲಾ–ಕಾಲೇಜುಗಳ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ಹಾಗೂ ಜನಪರ ಕಾರ್ಯಗಳನ್ನು ಅನುಷ್ಠಾನಗೊಳಿಸುವಲ್ಲಿ ಶ್ರಮಿಸುತ್ತಿದ್ದಾರೆ.

**ಡಾ. ಬಿ.ವಿ. ವಸಂತಕುಮಾರ್‌ರವರು** ದಾವಣಗರೆ ಜಿಲ್ಲೆ ಚನ್ನಗಿರಿ ತಾಲ್ಲೂಕು ತಿಪ್ಪಗೊಂಡನಹಳ್ಳಿಯವರು. ಮೈಸೂರು ವಿಶ್ವವಿದ್ಯಾನಿಲಯದಿಂದ ಬಿ.ಎ, ಕನ್ನಡ ವಿಷಯದಲ್ಲಿ ನಾಲ್ಕು ಚಿನ್ನದ ಪದಕಗಳೊಂದಿಗೆ ಸ್ನಾತಕೋತ್ತರ ಪದವಿ ಮತ್ತು ಪಿಎಚ್‌ಡಿ ಪಡೆದಿರುವರು. ಶಿಕಾರಿಪುರದಲ್ಲಿ ಉಪನ್ಯಾಸಕರಾಗಿ ವೃತ್ತಿಯನ್ನು ಆರಂಭಿಸಿದರು. ಕೊಣನೂರು, ಕಡೂರು ಮತ್ತು ಮಂಡ್ಯದ ಸರ್ಕಾರಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿ, ಪ್ರಸ್ತುತ ಮೈಸೂರಿನ ಮಹಾರಾಣಿ ಪದವಿ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಕುಮುದಿನಿಯ ಕಿರಣಗಳು, ಬೆಟ್ಟದ ಮುಡಿಗೆ ಹೂ, ಒಲುಮೆಯ ಕುಲುಮೆಯಲ್ಲಿ, ಕಾಯಕ ಮೀಮಾಂಸೆ ಸೇರಿದಂತೆ ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುತ್ತಾರೆ.

**ಶ್ರೀ ಬಿ. ನಿರಂಜನಮೂರ್ತಿಯವರು** ನಂಜನಗೂಡು ತಾಲ್ಲೂಕು ದೇವನೂರು ಗ್ರಾಮದವರು. ಜೆಎಸ್‌ಎಸ್ ಕಾಲೇಜಿನಲ್ಲಿ ಇಂಗ್ಲಿಷ್ ಉಪನ್ಯಾಸಕರಾಗಿ ವೃತ್ತಿ ಆರಂಭಿಸಿದರು. ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದಲ್ಲಿ ಸಹಾಯಕ ನಿರ್ದೇಶಕರಾಗಿರುವರು. ಕುವೆಂಪು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿದ್ದರು. ಧರ್ಮಪತ್ನಿ ಡಾ. ಬೆಳಕು ವಿ. ಚಂದ್‌ರವರು ಮೈಸೂರಿನ ಇಂಡಸ್ ವ್ಯಾಲಿ ಆಯುರ್ವೇದಿಕ್ ಸೆಂಟರ್‌ನಲ್ಲಿ ಮುಖ್ಯ ವೈದ್ಯಾಧಿಕಾರಿಗಳಾಗಿದ್ದಾರೆ. ಪುತ್ರ ನಿರುಪಮ್ ಎನ್. ವಿಜಯ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿರುವ ಜೆಎಸ್‌ಎಸ್ ಪಬ್ಲಿಕ್ ಶಾಲೆಯಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ.